# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 1391(1569) |
| ಸದಸ್ಯರ ಹೆಸರು | : | ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 17.03.02026 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ವಿಮಾನ ನಿಲ್ದಾಣಕ್ಕೆ ಯಾವುದೇ ವಿಮಾನ ಹಾರಾಟವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿಮಾನ ಹಾರಾಟ ನಿಲ್ಲಿಸಲು ಕಾರಣವೇನು; | ಬೆಂಗಳೂರು-ಕಲಬುರಗಿ ಮಾರ್ಗದಲ್ಲಿ ಸೇವೆಯನ್ನು ಒದಗಿಸುತ್ತಿದ್ದ ಮೆII Ghodawat ಸಂಸ್ಥೆಯು ಈ ಮಾರ್ಗದಲ್ಲಿ ಪ್ರಯಾಣಿಸುವ ಪ್ರಯಾಣಿಕರ ಬೇಡಿಕೆಯ ಕುಸಿತದಿಂದ ಹಾಗೂ ವಾಣಿಜ್ಯ ಕಾರ್ಯಸಾಧ್ಯತೆಯಿಲ್ಲದ ಕಾರಣ, ದಿನಾಂಕ:15.10.2025 ರಿಂದ ವಿಮಾನಯಾನ ಸೇವೆಯನ್ನು ಸ್ಥಗಿತಗೊಳಿಸಿದೆ. |
| (ಆ) | ಇದು ಸ್ಥಗಿತಗೊಂಡರೆ ತುರ್ತು ಸಂದರ್ಭ ತೆರಳಲು ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ದಿನಾಂಕ:08.04.2025 ರಂದು ವಿಮಾನ ನಿರ್ವಾಹಕರುಗಳೊಂದಿಗೆ (Air Operators) ನಡೆಸಿದ ಸರ್ಕಾರದ ಉನ್ನತ ಮಟ್ಟದ ಸಭೆಯಲ್ಲಿ ಕಲಬುರಗಿ ವಿಮಾನ ನಿಲ್ದಾಣದಿಂದ ವಿವಿಧ ನಗರಗಳಿಗೆ ವಿಮಾನಯಾನ ಸಂಪರ್ಕ ಕಲ್ಪಿಸಲು ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈವರೆಗೂ, ಯಾವುದೇ ಪ್ರಸ್ತಾವನೆಗಳು ವಿಮಾನ ನಿರ್ವಾಹಕರುಗಳಿಂದ ಸ್ವೀಕೃತವಾಗಿರುವುದಿಲ್ಲ.<br><br>ಬೆಂಗಳೂರು-ಕಲಬುರಗಿ ಮಾರ್ಗದಲ್ಲಿ ಪ್ರಸ್ತುತ ಕಾರ್ಯಾಚರಣೆ ಸ್ಥಗಿತಗೊಳಿಸಿರುವ ಸಂಸ್ಥೆಯಿಂದ ವಿಮಾನಯಾನ ಸೇವೆಯನ್ನು ಮುಂದುವರೆಸಲು ಇಲ್ಲವೇ ಪ್ರಾದೇಶಿಕ ಸಂಪರ್ಕ ಯೋಜನೆಯಡಿಯಲ್ಲಿ ಇತರ ಅರ್ಹ ನಿರ್ವಾಹಕರಿಂದ ಹೊಸದಾಗಿ ಬಿಡ್‌ಗಳನ್ನು ಆಹ್ವಾನಿಸುವಂತೆ ಕೇಂದ್ರ ಸರ್ಕಾರವನ್ನು ದಿನಾಂಕ:26.10.2025 ರಂದು ಕೋರಲಾಗಿದೆ.<br><br>ಈ ಕುರಿತು ಸದ್ಯದಲ್ಲಿಯೇ ವಿಮಾನ ನಿರ್ವಾಹಕರುಗಳೊಂದಿಗೆ (Air Operators) ಮತ್ತೊಮ್ಮೆ ಉನ್ನತ ಮಟ್ಟದ ಸಭೆಯನ್ನು ಆಯೋಜಿಸಲು ಉದ್ದೇಶಿಸಿದೆ. |
| (ಇ) | ಕಲಬುರಗಿ ವಿಮಾನ ನಿಲ್ದಾಣಕ್ಕೆ ಮತ್ತೆ ಯಾವ ಕಾಲಮಿತಿಯೊಳಗೆ ವಿಮಾನ ಹಾರಾಟ ಪ್ರಾರಂಭಿಸಲಾಗುವುದು; ವಿಮಾನ ಕಂಪನಿಗಳ ಜೊತೆ ಚರ್ಚಿಸಲಾಗಿದೆಯೇ? | ಬೆಂಗಳೂರು-ಕಲಬುರಗಿ ಮಾರ್ಗದಲ್ಲಿ ವಿಮಾನಯಾನವನ್ನು ಪ್ರಾರಂಭಿಸುವ ಕುರಿಂತಂತೆ KSIIDC ನಿಗಮವು Expression of Interest ಅನ್ನು ದಿನಾಂಕ:18.02.2026 ರಂದು ಆಹ್ವಾನಿಸಲಾಗಿದ್ದು, ವಿಮಾನ ನಿರ್ವಾಹಕರುಗಳು ಪ್ರಸ್ತಾವನೆಯನ್ನು ಸಲ್ಲಿಸಲು ದಿನಾಂಕ: 05.03.2026 ರಂದು ಕಡೆಯ ದಿನವಾಗಿರುತ್ತದೆ. ಪ್ರಸ್ತಾವನೆಗಳನ್ನು ಸ್ವೀಕರಿಸಿದ ನಂತರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ:ಮೂಲಇ62 ರಾಅವಿ 2026

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು